ಅಮಲ್ಜಾರಿ ಸಂಖ್ಯೆ 28/2024

ಪಿ ಡಬ್ಲ್ಯೂ: 1

**ದಿನಾಂಕ : 10.02.2026 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ – ತೀರ್ಪುಋಣಿ ಪರ ಶ್ರೀ ಎಸ್ ಎನ್ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರಿಕೆಯಲ್ಲಿನ ಸಂಗತಿಗಳನ್ನು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ನನಗೆ ಗೊತ್ತು. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ, ನಿವೇಶನದ ಬಳಿ ಹೋದಾಗ ತೀರ್ಋಣಿಗಳು 1 ರಿಂದ 6ರವರು ಗುಂಪುಕಟ್ಟಿಕೊಂಡು ನನ್ನ ಮೇಲೆ ಹಲ್ಲೆ ಮಾಡಲು ಬಂದಿದ್ದರು ಎಂದು ತಿಳಿಸಿರುತ್ತೇನೆ ಎಂದರೆ ಸರಿ. ನನ್ನ ಅಸಲು ದಾವೆಯಲ್ಲಿ ನಾನು ಯಾವುದೇ ಪರಿಹಾ ಕೇಳಿಲ್ಲ. ಅಮಲ್ಜಾರಿ ಅರ್ಜಿಯಲ್ಲಿ ನಮ್ಮ ಜಾಗದಲ್ಲಿ ಇರಲು ಅನವು ಮಾಡಿಕೊಡುವಂತೆ ಕೇಳಿಕೊಂಡಿರುತ್ತೇನೆ. ತೀರ್ಪು ಋಣಿಗಳು ನಿಖರವಾಗಿ ಯಾವ ದಿನದಂದು ಗುಂಪು ಕಟ್ಟಿಕೊಂಡು ಹಲ್ಲೆ ಮಾಡಲು ಬಂದಿದ್ದರು ಎಂಬುದನ್ನು ನಾನು ನನ್ನ ಮುಖ್ಯ ವಿಚಾರಣೆಯಲ್ಲಾಗಲೀ, ಅರ್ಜಿಯಲ್ಲಾಗಲೀ ತಿಳಿಸಿಲ್ಲ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಪೊಲೀಸ್ ಠಾಣೆಯಲ್ಲಿ ದೂರು ದಾಖಲು ಮಾಡಿದ್ದೆವು ಎಂದು ನುಡಿಯುತ್ತಾರೆ. ಆ ಬಗ್ಗೆ ಯಾವುದೇ ದಾಖಲೆಯನ್ನು ನ್ಯಾಯಾಲಯದ ಸಮಕ್ಷಮ ಹಾಜರು ಪಡಿಸಿರುವುದಿಲ್ಲ. ತೀರ್ಪು ಋಣಿಗಳು ನನಗೆ ನನ್ನ ಅರ್ಜಿಯಲ್ಲಿ ತಿಳಿಸಿರುವಂತೆ ಯಾವುದೇ ರೀತಿಯ ತೊಂದರೆ ಕೊಟ್ಟಿಲ್ಲ ಎಂದರೆ ಸಾಕ್ಷಿಯು ಸರ್ಕಲ್ ಇನ್ಸ್ ಪೆಕ್ಟರ್ ನಮ್ಮಿಬ್ಬರನ್ನೂ ಕರೆಸಿ ಬುದ್ಧಿವಾದ ಹೇಳಿ ಕಳುಹಿಸಿದ್ದರು ಎಂದು ನುಡಿಯುತ್ತಾರೆ. ಆ ಬಗ್ಗೆ ಯಾವುದೇ ದಾಖಲಾತಿಗಳನ್ನು ಹಾಜರು ಪಡಿಸಿರುವುದಿಲ್ಲ. ತೀರ್ಪು ಋಣಿಗಳು ಯಾವುದೇ ತೊಂದರೆ ಕೊಡದೇ ಇದ್ದರೂ ಅವರಿಗೆ ತೊಂದರೆ ಕೊಡುವ ಉದ್ದೇಶದಿಂದ ಈ ಸುಳ್ಳು ಅರ್ಜಿ ದಾಖಲು ಮಾಡಿದ್ದೇನೆ ಎಂದರೆ ಸರಿಯಲ್ಲ.

ದಾವಾ ಅನುಸೂಚಿತ ಸ್ವತ್ತು ನಿವೇಶನವಾಗಿರುವುದಿಲ್ಲ ಮನೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ವಾಸ ಮಾಡುತ್ತಿರುವ ಮನೆಯ ಪಕ್ಕದಲ್ಲಿ ಪ್ರತಿವಾದಿಗಳಿಗೆ ಸೇರಿದ ಖಾಲಿ ನಿವೇಶನ ಇದ್ದು ಅದನ್ನು ಕೊಡುವುದಾಗಿ ಪ್ರತಿವಾದಿಗಳು ಹೇಳಿದ್ದರೂ ಸಹಾ ನಾನು ಒಪ್ಪಿರುವುದಿಲ್ಲ ಎಂದರೆ ಸರಿ. ನಾನು ಕೇಳಿರುವ ಪರಿಹಾರಕ್ಕೆ ಅರ್ಹನಲ್ಲ ಎಂದರೆ ಸರಿಯಲ್ಲ. ನಾನು ಎಂದಿಗೂ ದಾವಾ ಅನುಸೂಚಿತ ಸ್ವತ್ತಿನ ಸ್ವಾಧೀನಾನುಭವದಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃಇಲ್ಲ.**

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ ಹೇ ಕೇ ಸ ಇದೆ

( ಕಾವ್ಯ ಶ್ರೀ. ಎಂ )

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು

ಜೆ ಎಂ ಎಫ್ ಸಿ., ಕೊಳ್ಳೇಗಾಲ